ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ:: Amrutha Power Limited ಕಂಪನಿಗೆ ಹಂಚಿಕೆಯಾಗಿರುವ 15 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಮೆ: SPI Green Energy ಕಂಪನಿಗೆ ವರ್ಗಾಯಿಸಿ, ಸದರಿ ಸಾಮರ್ಥ್ಯವನ್ನು 16 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸುವ ಕುರಿತು.

ಓದಲಾಗಿದೆ: 1) ಸರ್ಕಾರಿ ಆದೇಶ ಸಂಖ್ಯೆ: ಇಎನ್ 36 ಎನ್‌ಸಿಇ 2005 ದಿನಾಂಕ:22.03.2005

2) ಸರ್ಕಾರಿ ಆದೇಶ ಸಂಖ್ಯೆ: ಇಎನ್ 279 ಎನ್‌ಸಿಇ 2005 ದಿನಾಂಕ:14.10.2005.

3) ಸರ್ಕಾರಿ ಆದೇಶ ಸಂಖ್ಯೆ: ಇಎನ್ 141 ಎನ್‌ಸಿಇ 2007 ದಿನಾಂಕ:16.05.2007.

4) ಸರ್ಕಾರಿ ಆದೇಶ ಸಂಖ್ಯೆ: ಇಎನ್ 210 ಎನ್‌ಸಿಇ 2010 ದಿನಾಂಕ: 14.12.2010.

5) ಸರ್ಕಾರಿ ಆದೇಶ ಸಂಖ್ಯೆ: ಇಎನ್ 164 ಎನ್‌ಸಿಇ 2011 ದಿನಾಂಕ: 26.12.2014.

6) ವ್ಯವಸ್ಥಾಪಕ ನಿರ್ದೇಶಕರ, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ರವರ ಪತ್ರ ಸಂಖ್ಯೆ: KRED/08/SPIGE-15 MW to 16 MW (APPL-15 MW)/2014/300 ದಿನಾಂಕ: 28.01.2015.

* * *

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1) ಮತ್ತು (2)ರಲ್ಲಿನ ಸರ್ಕಾರಿ ಆದೇಶಗಳಲ್ಲಿ ಮೆ॥ ಅಮೃತ ಪವರ್ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಅನುಕ್ರಮವಾಗಿ, ಚಿಕ್ಕಮಗಳೂರು ಜಿಲ್ಲೆಯ ತರಿಕೆರೆ ತಾಲ್ಲೂಕಿನ ತಿಪ್ಪಗೊಂಡನಹಳ್ಳಿ ಪ್ರದೇಶದಲ್ಲಿ 5.00 ಮೆಗಾ ವ್ಯಾಟ್ ಮತ್ತು ಚಿಕ್ಕಮಗಳೂರು ಜಿಲ್ಲೆಯ ಹನ್ನಿ, ಗೆಜ್ಜೆಗೊಂಡನಹಳ್ಳಿ, ತಿಮ್ಮಾಪುರ ಗ್ರಾಮಗಳಲ್ಲಿ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಿ ಆದೇಶಿಸಲಾಗಿತ್ತು. ತದನಂತರ, ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಸರ್ಕಾರಿ ಆದೇಶದಲ್ಲಿ ಸದರಿ ಸಾಮರ್ಥ್ಯವನ್ನು 7.00 (5+2=7) ಮೆ.ವ್ಯಾ. ನಿಂದ 15 ಮೆ.ವ್ಯಾಗೆ ಹೆಚ್ಚಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ಸರ್ಕಾರಿ ಆದೇಶದಲ್ಲಿ ಮೆ॥ ಅಮೃತ ಪವರ್ ಪ್ರೈವೇಟ್ ಲಿಮಿಟೆಡ್ ಇವರಿಗೆ ಚಿಕ್ಕಮಗಳೂರು ಜಿಲ್ಲೆಯ ತರಿಕೆರೆ ತಾಲ್ಲೂಕಿನ ತಿಪ್ಪಗೊಂಡನಹಳ್ಳಿ ಹಾಗೂ ಹನ್ನಿ, ಗೆಜ್ಜೆಗೊಂಡನಹಳ್ಳಿ, ತಿಮ್ಮಾಪುರ ಗ್ರಾಮಗಳಲ್ಲಿ ಹಂಚಿಕೆ ಮಾಡಲಾದ 15.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ನಿಗದಿತ ಅವಧಿಯಲ್ಲಿ ಅನುಷ್ಠಾನಗೊಳಿಸದೇ ಇರುವುದರಿಂದ ಹಂಚಿಕೆ ಆದೇಶ ಹಾಗೂ ಈ ಸಂಬಂಧ ಸರ್ಕಾರದೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆಯನ್ನು ರದ್ದು ಪಡಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರ ಸರ್ಕಾರಿ ಆದೇಶದಲ್ಲಿ ಮೆ॥ ಅಮೃತ ಪವರ್ ಪ್ರೈವೇಟ್ ಲಿಮಿಟೆಡ್ ಕಂಪನಿಯ ಕೋರಿಕೆಯ ಮೇರೆಗೆ, ಚಿಕ್ಕಮಗಳೂರು ಜಿಲ್ಲೆಯ ತರಿಕೆರೆ ತಾಲ್ಲೂಕಿನ ತಿಪ್ಪಗೊಂಡನಹಳ್ಳಿ ಹಾಗೂ ಹನ್ನಿ, ಗೆಜ್ಜೆಗೊಂಡನಹಳ್ಳಿ, ತಿಮ್ಮಾಪುರ ಗ್ರಾಮಗಳಲ್ಲಿ ಹಂಚಿಕೆ ಮಾಡಿ ರದ್ದುಪಡಿಸಲಾಗಿದ್ದ 15.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಅನುಷ್ಠಾನಕ್ಕೆ 2 ವರ್ಷಗಳ ಕಾಲಾವಕಾಶವನ್ನು ನೀಡಿ ಕೆಲವೊಂದು ಷರತ್ತುಗಳನ್ನು ವಿಧಿಸಿ ಪೂರ್ವಸ್ಥಿತಿಗೆ ತಂದು ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (6)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ರವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, ಮೆ:: Amrutha Power Limited ಕಂಪನಿಗೆ ಚಿಕ್ಕಮಗಳೂರು ಜಿಲ್ಲೆಯ ತರಿಕೆರೆ ತಾಲ್ಲೂಕಿನ ತಿಪ್ಪಗೊಂಡನಹಳ್ಳಿ, ಗೆಜ್ಜೆಗೊಂಡನಹಳ್ಳಿ ಮತ್ತು ತಿಮ್ಮಾಪುರ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 15 ಮೆ.ವ್ಯಾ. ಸಾಮರ್ಥ್ಯದ ಪವನ

---2)

ವಿದ್ಯುತ್ ಯೋಜನೆಯನ್ನು ಮೆ: SPI Green Energy ಕಂಪನಿಗೆ ವರ್ಗಾಯಿಸುವಂತೆ ಅಭಿವೃದ್ಧಿದಾರು ಕೋರಿರುತ್ತಾರೆ. ಈ ವರ್ಗಾವಣೆಗೆ ಎರಡೂ ಕಂಪನಿಯವರು ಸಹಮತಿ ನೀಡಿರುತ್ತಾರೆ. ಅಲ್ಲದೆ ಮೆ: SPI Green Energy ಕಂಪನಿಗೆ ವರ್ಗಾವಣೆಯಾಗಲಿರುವ 15 ಮೆ.ವ್ಯಾ. ಸಾಮರ್ಥ್ಯವನ್ನು 16 ಮೆ.ವ್ಯಾ.ಗೆ ಹೆಚ್ಚಿಸುವಂತೆ ಕೋರಿ ಮೆ: SPI Green Energy ಕಂಪನಿಯು ಡಿಪಿಆರ್ ಸಲ್ಲಿಸಿ ವರ್ಗಾವಣೆ ಹಾಗೂ ಸಾಮರ್ಥ್ಯ ಹೆಚ್ಚಳ ಶುಲ್ಕಗಳನ್ನು ಪಾವತಿಸಿರುವುದರಿಂದ ಸದರಿ 15 ಮೆ.ವ್ಯಾ ಸಾಮರ್ಥ್ಯದ ಯೋಜನೆಯನ್ನು ಮೆ: Amrutha Power Limited ರವರಿಂದ ಮೆ: SPI Green Energy ಕಂಪನಿಗೆ ವರ್ಗಾಯಿಸಿ. ನಂತರ ಯೋಜನೆಯ ಸಾಮರ್ಥ್ಯವನ್ನು 16 ಮೆ.ವ್ಯಾ.ಗೆ ಹೆಚ್ಚಿಸುವ ಪ್ರಸ್ತಾವನೆಯನ್ನು ಪರಿಗಣಿಸಬಹುದೆಂದು ಶಿಫಾರಸ್ಸು ಮಾಡುತ್ತಾ, ಯೋಜನೆಗೆ ಸಂಬಂಧಿಸಿದ ತಾಂತ್ರಿಕ ಮಾಹಿತಿಯೊಂದಿಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲಿನ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ:-

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 18 ಎನ್‌ಸಿಇ 2015,**
**ಬೆಂಗಳೂರು, ದಿನಾಂಕ: 17..07.2015.**

ಮೆ:: Amrutha Power Limited ಕಂಪನಿಗೆ, ಚಿಕ್ಕಮಗಳೂರು ಜಿಲ್ಲೆಯ ತರಿಕೆರೆ ತಾಲ್ಲೂಕಿನ ತಿಪ್ಪಗೊಂಡನಹಳ್ಳಿ, ಗೆಜ್ಜೆಗೊಂಡನಹಳ್ಳಿ ಮತ್ತು ತಿಮ್ಮಾಪುರ ಗ್ರಾಮಗಳಲ್ಲಿ ಹಂಚಿಕೆಯಾಗಿರುವ 15 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಮೆ: SPI Green Energy ಕಂಪನಿಗೆ ವರ್ಗಾಯಿಸಿ, ಯೋಜನೆಯ ಸಾಮರ್ಥ್ಯವನ್ನು 16 ಮೆ.ವ್ಯಾ.ಗೆ ಹೆಚ್ಚಿಸಿ, ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತಿಗೊಳಪಟ್ಟು ಆದೇಶಿಸಲಾಗಿದೆ:-

## Schedule

**Geographical area description for 16 MW capacity wind Power Project**

| Toposheet No | Geographical Area details | Sanctioned /Transfer Capacity in MW | Enhancement proposed in MW | Total capacity (No.of WTGs & rating in kW) |
|---|---|---|---|---|
| 480/13& 14 | The ridge mostly oriented in North west-south east direction located on the west of Tippagondanahalli village has 1019 m peak at one point. The proposed area is bounded by the following geographical co-ordiantes:<br>Latitude: 13°44′43″- 13°45′16″ N<br>Longitude: 75°56′40″-75°57′46″ E<br>**Ridge peaks: 1019 m amsl.** | 15 MW | 01 MW | 16 MW (10 x 1600 kW) |
| 48 O/13 | A North - South oriented ridge situated on the North of its existing allotment. The identified area is in forest and has external features like situated on the North-West of Tippagondanahalli. This area is held in the following Geographical co-ordniates:<br>Latitude: 13°45′0″-13°45′57″ N<br>Longitude: 75°56′27″- 75°57′26″E<br>Ridge peaks: 722, 736m amsl. | | | |

ಷರತ್ತುಗಳು:-

1 ಮೆ: SPI Green Energy ರವರು 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 2011 ದಿನಾಂಕ 06.1.2012 ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

2 ಈ ಯೋಜನೆಯನ್ನು ದಿನಾಂಕ 25.12.2016 ರೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

3 ಅಭಿವೃದ್ಧಿದಾರರು ಯೋಜನೆಗೆ ಸಂಬಂಧಿಸಿದಂತೆ ನಿಯಮಾನುಸಾರ ಪಾವತಿಸಬೇಕಾಗಿರುವ ಎಲ್ಲಾ ತರಹದ ಶುಲ್ಕವನ್ನು ಕ್ರೆಡಲ್‌ಗೆ ಪಾವತಿಸತಕ್ಕದ್ದು.

4 ಮೆ: SPI Green Energy ಕಂಪನಿಯು ಈ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಸಂಬಂಧಿಸಿದ ಎಸ್ಕಾಂನೊಂದಿಗೆ ಪಿಪಿಎ/ವೀಲಿಂಗ್ ಅಂಡ್ ಬ್ಯಾಂಕಿಂಗ್ ಮೂಲಕ ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ಬಗ್ಗೆ ಪೂರಕ ಒಡಂಬಡಿಕೆಯನ್ನು ಮಾಡಿಕೊಳ್ಳತಕ್ಕದ್ದು.

5 ಈ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಮೂಲ ಹಂಚಿಕೆ ಆದೇಶದಲ್ಲಿನ ಮತ್ತು ಯೋಜನೆಗೆ ಸಂಬಂಧಿಸಿದಂತೆ ಹೊರಡಿಸಲಾಗಿರುವ ಇತರೆ ಎಲ್ಲಾ ಆದೇಶಗಳಲ್ಲಿನ ಷರತ್ತು ಮತ್ತು ನಿಬಂಧನೆಗಳು ಯಥಾವತ್ತಾಗಿ ಮುಂದುವರಿಯುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☎ 22034674.

17/7/15

ಇವರಿಗೆ:

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.

ಪ್ರತಿ:

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ ವಿಕಾಸ ಸೌಧ, ಬೆಂಗಳೂರು-1.

2 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.

4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.

5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ.39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.

6 ಜಿಲ್ಲಾಧಿಕಾರಿಗಳು, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು.

7 ಉಪ ಅರಣ್ಯ ಸಂರಕ್ಷಣಾಧಿಕಾರಿ ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು.

8 ವ್ಯವಸ್ಥಾಪಕ ನಿರ್ದೇಶಕರು, ಮಂಗಳೂರು ವಿದ್ಯುತ್ ಸರಬರಾಜು ಕಂಪನಿ, ಮಂಗಳೂರು.

9 M/s SPI Green Energy, No. 3, 1st Floor, IInd Street, Subba Rao Avenue, College Road, Chennai-600006.

10 M/s Amrutha Power Energy, No. 25, 2nd Floor, Le Parc Richmonde, Richmond Road, Bangalore-560025.

10 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.

11 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.

12 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.